ದೂರವಾಣಿ/ಫ್ಯಾಕ್ಸ್ : 2752 6208
ವೆಬ್‌ಸೈಟ್ : www.kanakapura-pa.in
E-mail : kkpaplan@gmail.com

# ಕನಕಪುರ ಯೋಜನಾ ಪ್ರಾಧಿಕಾರ

ಮುನ್ಸಿಪಲ್ ಖಾತಾ ನಂ. 297 : 271, ರಂಗನಾಥಸ್ವಾಮಿ ದೇವಸ್ಥಾನ ರಸ್ತೆ, ಕೋಟೆ, ಕನಕಪುರ – 562 117

ಸಂಖ್ಯೆ: ಕಯೋಪ್ರಾ/ಸಿಸಿ/03/2016–17 1385 ದಿನಾಂಕ : 5 AUG 2016

## :: ಪ್ರಾರಂಭಿಕ ಪ್ರಮಾಣ ಪತ್ರ ::

ವಿಷಯ : ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕಗ್ಗಲೀಪುರ ಗ್ರಾಮದ ಖಾತಾ ನಂ. 519 ರಲ್ಲಿ ವಸತಿ ಸಮುಚ್ಚಯ (ಅಪಾರ್ಟ್‌ಮೆಂಟ್) ಕಟ್ಟಡ ಕಟ್ಟಲು ಪ್ರಾರಂಭಿಕ ಪ್ರಮಾಣ ಪತ್ರ ನೀಡುವ ಬಗ್ಗೆ.

ಉಲ್ಲೇಖ : 1) ನಿಮ್ಮ ಮನವಿ ಪತ್ರ ದಿನಾಂಕ : 16.05.2016.
2) ಈ ಕಛೇರಿ ಪತ್ರ ಸಂಖ್ಯೆ: ಕಯೋಪ್ರಾ/ಎಲ್‌ಎಓ/09/2015–16/71 ದಿ : 21.04.2016.
3) ಪ್ರಾಧಿಕಾರಕ್ಕೆ ಶುಲ್ಕ ಪಾವತಿಸಿದ ದಿನಾಂಕ : 30.07.2016.

********

ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ (1)ರ ಪತ್ರದಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಕಗ್ಗಲೀಪುರ ಗ್ರಾಮದ ಖಾತಾ ನಂ. 519 ರಲ್ಲಿ ವಸತಿ ಸಮುಚ್ಚಯ (ಅಪಾರ್ಟ್‌ಮೆಂಟ್) ಕಟ್ಟಡ ಕಟ್ಟಲು ಪ್ರಾರಂಭಿಕ ಪ್ರಮಾಣ ಪತ್ರ ನೀಡುವಂತೆ ಕೋರಲಾಗಿದೆ. ಪ್ರಸ್ತಾವಿತ ಜಮೀನಿಗೆ ಪ್ರಾಧಿಕಾರದಿಂದ ಈಗಾಗಲೇ ಉಲ್ಲೇಖ (2)ರ ಪತ್ರದಲ್ಲಿ ವಸತಿ ಉದ್ದೇಶದ ಏಕ ನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲಾಗಿದೆ. ಅರ್ಜಿದಾರರು ಉಲ್ಲೇಖ (3)ರಲ್ಲಿ ಶುಲ್ಕಗಳನ್ನು ಪಾವತಿಸಿರುವುದರಿಂದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 15(1)ರನ್ವಯ ವಸತಿ ಸಮುಚ್ಚಯ (ಅಪಾರ್ಟ್‌ಮೆಂಟ್) ಕಟ್ಟಡ ಕಟ್ಟಲು **ಮೆ॥ ಶ್ರೀ ಸುಮೇರು ರಿಯಾಲ್ಟಿ ಪ್ರೈವೇಟ್ ಲಿಮಿಟೆಡ್** ಇವರಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಪ್ರಾರಂಭಿಕ ಪ್ರಮಾಣ ಪತ್ರ ನೀಡಲಾಗಿದೆ.

## :: ಷರತ್ತುಗಳು ::

1) ಮೇಲ್ಕಂಡ ನಿವೇಶನದಲ್ಲಿ ಕಟ್ಟುವ ಕಟ್ಟಡಗಳನ್ನು ಈ ಕಛೇರಿಯಿಂದ ಅನುಮತಿ ನೀಡಿರುವಂತೆ ವಸತಿ ಉಪಯೋಗಕ್ಕೆ ಮಾತ್ರ ಉಪಯೋಗಿಸತಕ್ಕದ್ದು ಮತ್ತು ವಸತಿ ಸಮುಚ್ಚಯ (ಅಪಾರ್ಟ್‌ಮೆಂಟ್) ಕಟ್ಟಡವನ್ನು ಅನುಮೋದಿತ ನಕ್ಷೆಯಂತೆ ನಿರ್ಮಿಸತಕ್ಕದ್ದು.
2) ಕಟ್ಟಡದ ನಿರ್ಮಾಣ ಕಾರ್ಯಕ್ಕೆ ಬಾಲ ಕಾರ್ಮಿಕರನ್ನು ನಿಯೋಜಿಸಿಕೊಳ್ಳತಕ್ಕದ್ದಲ್ಲ.
3) ಕಟ್ಟಡದ ನಿರ್ಮಾಣಕ್ಕೆ ಜಾರಿಯಲ್ಲಿರುವ ವಲಯ ನಿಯಮಾವಳಿಗಳು ಮತ್ತು ಕಟ್ಟಡದ ವಿಧಿಗಳ ನಿಬಂಧನೆಗಳಿಗೆ ಅನುಗುಣವಾಗಿರತಕ್ಕದ್ದು.
4) ಈ ಪ್ರಾರಂಭಿಕ ಪ್ರಮಾಣ ಪತ್ರವು ಅನುಮೋದನೆ ದಿನಾಂಕದಿಂದ ಎರಡು (02) ವರ್ಷದವರೆಗೆ ಮಾತ್ರ ಮಾನ್ಯತೆ ಹೊಂದಿರುತ್ತದೆ. ಈ ಅವಧಿ ಮುಗಿದ ನಂತರ ಹೊಸದಾಗಿ ಪ್ರಾರಂಭಿಕ ಪ್ರಮಾಣ ಪತ್ರ ಪಡೆಯದೆ ಕಟ್ಟಡ ಕಾರ್ಯ ಕೈಗೊಳ್ಳಬಾರದು ಹಾಗೂ ಮುಂದುವರೆಸಬಾರದು.
5) ಅನುಮೋದಿತ ನಕ್ಷೆಯನ್ನು ಉಲ್ಲಂಘಿಸಿ ಕಟ್ಟಡ ಕಾರ್ಯವನ್ನು ಕೈಗೊಳ್ಳಬಾರದು ಮತ್ತು ಏನಾದರೂ ಬದಲಾವಣೆಗಳು ಅವಶ್ಯವಿದ್ದಲ್ಲಿ ಕಟ್ಟಡ ನಿರ್ಮಾಣಕ್ಕೆ ಮುಂಚೆ ಮಾರ್ಪಡಿತ ಕಟ್ಟಡ ನಕ್ಷೆಗೆ ಅನುಮೋದನೆ ಪಡೆದು ಮುಂದುವರೆಸತಕ್ಕದ್ದು.
6) ಒಂದು ಅನುಮೋದಿತ ಅಪಾರ್ಟ್‌ಮೆಂಟ್ ಕಟ್ಟಡ ನಕ್ಷೆಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಅಧಿಕಾರಿಗಳ ಸಮೀಕ್ಷೆಗಾಗಿ ಪ್ರದರ್ಶಿಸತಕ್ಕದ್ದು.
7) ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ರಸ್ತೆಯಲ್ಲಿ ಶೇಖರಣೆ ಮಾಡಬಾರದು, ಈ ಬಗ್ಗೆ ಕಂಡುಬಂದಲ್ಲಿ ಪ್ರಾರಂಭಿಕ ಪ್ರಮಾಣ ಪತ್ರವನ್ನು ರದ್ದುಪಡಿಸಲಾಗುವುದು.

...2

8) ಕಟ್ಟಡ ಜಾಗ ಹೊರತುಪಡಿಸಿ ಉಳಿದ ಸೂಕ್ತ ಪ್ರದೇಶದಲ್ಲಿ ಹಾಲಿ ಇರುವ ಮರಗಳನ್ನು ಉಳಿಸಿಕೊಂಡು ಹೊಸದಾಗಿ ಮರ/ಗಿಡಗಳನ್ನು ಬೆಳೆಸತಕ್ಕದ್ದು.

9) ನಿವೇಶನದ ಆವರಣದೊಳಗೆ ಮಳೆ ನೀರು ಕೊಯ್ಲನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳತಕ್ಕದ್ದು.

10) ಅನುಮೋದಿತ ವಸತಿ ಉದ್ದೇಶದ ಏಕ ನಿವೇಶನ ವಿನ್ಯಾಸ ನಕ್ಷೆಯಲ್ಲಿನ ಪ್ರದೇಶದಲ್ಲಿ ಕಟ್ಟಡಗಳ ನಿರ್ಮಾಣ ಸಂಬಂಧ ಸರ್ಕಾರದ ವಿವಿಧ ಇಲಾಖೆಗಳು ವಿಧಿಸುವ ಷರತ್ತು ಹಾಗೂ ನಿಬಂಧನೆಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

11) ಸೋಲಾರ್ ವಾಟರ್ ಹೀಟರನ್ನು ಕಟ್ಟಡಗಳಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.

12) ಪ್ರಸ್ತಾವಿತ ನಿವೇಶನವು ಯಾವುದೇ ಭೂ ಸ್ವಾಧೀನಕ್ಕೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.

13) ಈ ಜಮೀನಿನ ಬಗ್ಗೆ ಏನಾದರೂ ಸಿವಿಲ್ ವ್ಯಾಜ್ಯಗಳು ಉದ್ಭವಿಸಿದಲ್ಲಿ ನ್ಯಾಯಾಲಯದ ತೀರ್ಮಾನಕ್ಕೆ ನೀವು ಬದ್ಧರಾಗಿರತಕ್ಕದ್ದು.

14) ಕಟ್ಟಡ ನಕ್ಷೆ ಮಂಜೂರಾತಿ ಸಂಬಂಧ ನೀವು ತಪ್ಪು ಮಾಹಿತಿ/ದಾಖಲೆಗಳನ್ನು ನೀಡಿರುವುದು ಕಂಡುಬಂದರೆ ಈ ಮಂಜೂರಾತಿ ಆದೇಶವು ಸ್ವಯಂ ರದ್ದಾಗುತ್ತದೆಂದು ತಿಳಿಯತಕ್ಕದ್ದು.

15) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿಯ ಪತ್ರ ಸಂಖ್ಯೆ: PCB/282/CNP/15/H1380 ದಿನಾಂಕ : 20.02.2016 ರಲ್ಲಿನ ಷರತ್ತುಗಳನ್ನು ತಪ್ಪದೇ ಪಾಲಿಸತಕ್ಕದ್ದು.

16) ರಾಜ್ಯ ಅಗ್ನಿಶಾಮಕ ಇಲಾಖೆ ಪತ್ರ ಸಂಖ್ಯೆ: GBC(1)520/2015 ದಿನಾಂಕ : 29.03.2016 ರಲ್ಲಿನ ಷರತ್ತುಗಳನ್ನು ತಪ್ಪದೇ ಪಾಲಿಸತಕ್ಕದ್ದು.

17) ಸರ್ಕಾರವು ನಿಗಧಿಪಡಿಸುವ ಇತರೆ ಯಾವುದೇ ಶುಲ್ಕಗಳನ್ನು ಸಂಸ್ಥೆಯವರೇ ಪಾವತಿಸತಕ್ಕದ್ದು.

18) ಕಟ್ಟಡ ಕಾಮಗಾರಿಯನ್ನು ಪ್ರಾರಂಭಿಸುವ ಮುನ್ನ ಲಗತ್ತಿಸಿರುವ ಅನುಮೋದಿತ ಕಟ್ಟಡ ನಕ್ಷೆಗಳನ್ನು ಕಗ್ಗಲೀಪುರ ಗ್ರಾಮ ಪಂಚಾಯಿತಿಗೆ ಸಲ್ಲಿಸಿ, ಪಂಚಾಯಿತಿಯಿಂದ ಪರವಾನಗಿ ಪಡೆಯತಕ್ಕದ್ದು.

ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 15(4)ರಂತೆ ಕ್ರಮ ಕೈಗೊಳ್ಳಲಾಗುವುದು.

05.08.16

ಜಂಟಿ ನಿರ್ದೇಶಕರು
ನಗರ ಮತ್ತು ಗ್ರಾಮಾಂತರ ಯೋಜನೆ
ಹಾಗೂ ಸದಸ್ಯ-ಕಾರ್ಯದರ್ಶಿಗಳು,
ಕನಕಪುರ ಯೋಜನಾ ಪ್ರಾಧಿಕಾರ,
ಕನಕಪುರ.

ಇವರಿಗೆ,

ಮೆ॥ ಶ್ರೀ ಸುಮೇರು ರಿಯಾಲ್ಟಿ ಪ್ರೈವೇಟ್ ಲಿಮಿಟೆಡ್
ಸೈಟ್ ನಂ.1, ತ್ರಿಪುರ, ಸೌಧಾಮಿನಿ ಎಸ್ಟೇಟ್,
ಆರ್ಟ್ ಆಫ್ ಲಿವಿಂಗ್ ಆಶ್ರಮ ಹಿಂದೆ,
21ನೇ ಕಿ.ಮೀ. ಕನಕಪುರ ರಸ್ತೆ, ಉದಯಪುರ,
ಬೆಂಗಳೂರು-82